# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 11/ಸಭೆ/ಪಿಆರ್/    /2021-22    ದಿನಾಂಕ : 05/03/2022

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ಕುವೆಂಪುನಗರಕ್ಕೆ ಸಂಬಂಧಿಸಿದಂತೆ ವಾರ್ಡ್ ನಂ 11 ಕುವೆಂಪುನಗರ ವಾರ್ಡ್ ಕಛೇರಿಯಲ್ಲಿ ದಿನಾಂಕ 05/03/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

ಹಾಜರಿದ್ದ ಅಧಿಕಾರಿ /ನೌಕರರು

1. ಶ್ರೀ ಪ್ರಸನ್ನ ವೆಂಕಟೇಶ್, ನೋಡಲ್ ಅಧಿಕಾರಿ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ವಿನಯ್ ಕುಮಾರ್, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ
4. ಶ್ರೀ ಗೋಪಿ, ತೆರಿಗೆ ವಸೂಲಿಗಾರರು
5. ಶ್ರೀಮತಿ ಕಾಂತಮಣಿ, ಕಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ ಸುನೀಲ್, ಮಾರ್ಷಲ್

ಹಾಜರಿದ್ದ ಸದಸ್ಯರು/ ಸಾರ್ವಜನಿಕರು

1. ಶ್ರೀ ಮೋಹನ್, ಸಿಂಗಾಪುರ
2. ಶ್ರೀ ವಿನೋದ್, ಪ್ರಕೃತಿ ಲೇಔಟ್
3. ಶ್ರೀ ಹರೀಶ್, ವರದರಾಜನಗರ
4. ಶ್ರೀ ಓಂಕಾರ ಮೂರ್ತಿ, ವೈಷ್ಣವಿ ಲೇಔಟ್
5. ಶ್ರೀ ಶಿವಕುಮಾರ್, ಪ್ರಕೃತಿ ಲೇಔಟ್

ಶ್ರೀ ಪ್ರಸನ್ನ ವೆಂಕಟೇಶ್, ನೋಡೆಲ್ ಅಧಿಕಾರಿ:- ಸಭೆಗೆ ಹಾಜರಿದ್ದ ಅಧಿಕಾರಿಗಳಿಗೆ ಸ್ವಾಗತವನ್ನು ಕೋರಿದರು. ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ಕಾರ್ಯದರ್ಶಿಗೆ ತಿಳಿಸಿದರು.

ವರದರಾಜ ಸ್ವಾಮಿ ಬಡಾವಣೆಯಲ್ಲಿ ಬೆಸ್ಕಾಂ ವತಿಯಿಂದ ಯು.ಜಿ ಕೇಬಲ್ ಅಳವಡಿಸಲು ರಸ್ತೆಯನ್ನು ಕತ್ತರಿಸಿ ಹಾಗೆಯೇ ಬಿಟ್ಟಿರುವುದರಿಂದ ಸ್ಥಳೀಯ ನಿವಾಸಿಗಳಿಗೆ ಹಾಗೂ ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿರುವುದಾಗಿ ತಿಳಿಸಿರುತ್ತಾರೆ.
ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಸಂಬಂಧ ಪಟ್ಟ ಅಧಿಕಾರಿಗಳ ಗಮನಕ್ಕೆ ತರಲು ವಾರ್ಡ್ ಕಾರ್ಯದರ್ಶಿಗೆ ತಿಳಿಸಿದರು.

ಬಾಲಾಜಿ ಲೇಔಟ್, ಸಿಂಗಾಪುರ ಲೇಔಟ್, ವೈಷ್ಣವಿ ಲೇಔಟ್‌ಗಳಲ್ಲಿ ನೀರಿನ ಕೊರತೆ ಇರುವುದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆ ಉಂಟಾಗಿದ್ದು, ಸಮರ್ಪಕವಾಗಿ ನೀರನ್ನು ಪೂರೈಸಲು ಕೋರಿರುತ್ತಾರೆ.
ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಪರಿಶೀಲಿಸಿ ಕ್ರಮ ವಹಿಸುವುದಾಗಿ ತಿಳಿಸಿರುತ್ತಾರೆ.

ಶ್ರೀ ಹರೀಶ್ ರವರು ವರದರಾಜಸ್ವಾಮಿ ದೇವಸ್ಥಾನದ ರಸ್ತೆಯ ಚರಂಡಿಗಳಲ್ಲಿ ತುಂಬಿರುವ ಹೂಳು ಮತ್ತು ಮಣ್ಣನ್ನು ತೆರವುಗೊಳಿಸಿ ಚರಂಡಿಯ ನೀರು ಸರಾಗವಾಗಿ ಹೋಗಲು ಅನುವು ಮಾಡಿಕೊಡಲು ಕೋರಿದ್ದು, ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ವಾರ್ಡ್ ಅಭಿಯಂತರರಿಗೆ ಕ್ರಮ ಕೈಗೊಳ್ಳಲು ತಿಳಿಸಿದರು.

ವೇಲಾಂಗಣಿ ಲೇನ್‌ನಲ್ಲಿ ಕೆಲವು ಹುಡುಗರು ಗಾಂಜಾ ಸೇವನೆ, ಧೂಮಪಾನ, ಮಧ್ಯಪಾನ ಹಾಗೂ ದ್ವಿಚಕ್ರ ವಾಹನದ ಅತೀ ವೇಗ ಚಾಲನೆ ಮಾಡುತ್ತಿರುವುದರಿಂದ ಗಮನವಹಿಸಲು ಕೋರಿದರು. ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಪೋಲೀಸ್ ಠಾಣೆಗೆ ಮಾಹಿತಿ ನೀಡಿ ಸೂಕ್ತ ಕ್ರಮ ವಹಿಸಲಾಗುವುದು ಎಂದು ತಿಳಿಸಿರುತ್ತಾರೆ.

ಕುವೆಂಪುನಗರದಿಂದ ಗಂಗಮ್ಮಸರ್ಕಲ್ ಮುಖ್ಯ ರಸ್ತೆಗೆ ಹಾದು ಹೋಗುವ ರಸ್ತೆಯಲ್ಲಿ ವಿದ್ಯುತ್ ದೀಪಗಳನ್ನು ಸರಿಪಡಿಸಲು, ಸಿಂಗಾಪುರ ಗಾರ್ಡನ್, ಸಿಂಗಾಪುರ, ವರದರಾಜನಗರ, ಕುವೆಂಪುನಗರ 2ನೇ ಹಂತ, ರಾಮಚಂದ್ರಪುರ ವ್ಯಾಪ್ತಿಯ ಮುಖ್ಯ ರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಬೀದಿ ದೀಪಗಳು ಸರಿಯಾಗಿ ಕಾರ್ಯ ನಿರ್ವಹಿಸದೆ ಇರುವುದರಿಂದ ಸರಿಪಡಿಸಲು ಕೋರಿದರು.
ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಸಮಸ್ಯ ಬಗೆಹರಿಸಲು ಸ.ಕಾ.ಅ, ವಿದ್ಯುತ್ ರವರಿಗೆ ಮಾಹಿತಿ ನೀಡಲಾಗುವುದು ಎಂದು ತಿಳಿಸಿರುತ್ತಾರೆ.

ನೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ನಂ 11, ಕುವೆಂಪುನಗರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.